ಮೈದಾನವನ್ನು ಕ್ರೀಡಾಂಗಣವಾಗಿ ಪರಿವರ್ತಿಸಲು ಆಗುವ ಅಂದಾಜು ವೆಚ್ಚವೆಷ್ಟು?

ಆ) ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರದವರು ಮಂಜೂರು ಮಾಡಿರುವ ಹಣವೆಷ್ಟು? ಹಾಗೂ ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಅಜಯಕುಮಾರ್ ಸರ್‌ನಾಯಕ್(ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು):-

ಅ) ರೂ.26.00 ಲಕ್ಷಗಳು

ಆ) ಈ ಯೋಜನೆಗಾಗಿ (ಜಿಲ್ಲಾ ಪಂಚಾಯತ್‌ನಿಂದ) ರೂ.10.00 ಲಕ್ಷಗಳನ್ನು ಮಂಜೂರು ಮಾಡಲಾಗಿದೆ. ಜಿಲ್ಲಾ ಪಂಚಾಯತ್‌ನಿಂದ 2ನೇ ಕಂತಿನ ಹಣ ಮತ್ತು ಕೇಂದ್ರ ಸರ್ಕಾರದ ಅನುದಾನವು ಬಿಡುಗಡೆಯಾದ ತಕ್ಷಣ ಈ ನಿರ್ಮಾಣ ಕಾರ್ಯವನ್ನು ಪೂರ್ಣ ಗೊಳಿಸಲಾಗುವುದು.

ವಿಷಯ :- ಕರ್ನಾಟಕದಲ್ಲಿ ಆಯುರ್ವೇದ ಪದ್ದತಿಯನ್ನು ಜನಪ್ರಿಯಗೊಳಿಸುವುದು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:- 98(500)

ಶ್ರೀ ಕುಂಬ್ಳೆ ಸುಂದರ್ ರಾವ್ (ಸುರತ್‌ಕಲ್) :- ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಕರ್ನಾಟಕದಲ್ಲಿ ಇರುವ ಒಟ್ಟು ಆಯುರ್ವೇದ ಆಸ್ಪತ್ರೆಗಳು ಎಷ್ಟು?

ಆ) ಎಷ್ಟರಲ್ಲಿ ಡಾಕ್ಟರುಗಳು ಕಾರ್ಯ ನಿರ್ವಹಿಸುತ್ತಿರುವರು?

ಇ) ಎಷ್ಟು ಆಯುರ್ವೇದ ಆಸ್ಪತ್ರೆಗಳಲ್ಲಿ ಹಾಸಿಗೆ ವ್ಯವಸ್ಥೆ ಇದೆ?

ಈ) ಆಯುರ್ವೇದ ಪದ್ಧತಿ ಜನಪ್ರಿಯಗೊಳಿಸಲು ಸರ್ಕಾರ ಮಾಡಿರುವ ಯೋಜನೆಗಳೇನು?

ಡಾ: ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) 51

ಆ) ಎಲ್ಲಾ 51 ಆಯುರ್ವೇದ ಆಸ್ಪತ್ರೆಗಳಲ್ಲಿಯೂ ಡಾಕ್ಟರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ.

ಇ) ಎಲ್ಲಾ 51 ಆಯುರ್ವೇದ ಆಸ್ಪತ್ರೆಗಳಲ್ಲಿಯೂ ಹಾಸಿಗೆ ವ್ಯವಸ್ಥೆ ಇದೆ.

ಈ) ಆಯುರ್ವೇದ ಪದ್ಧತಿಯನ್ನು ಜನಪ್ರಿಯಗೊಳಿಸಲು ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟಗಳಲ್ಲಿ ಆಸ್ಪತ್ರೆಗಳನ್ನು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯಗಳನ್ನು ತೆರೆಯಲಾಗುತ್ತಿದೆ. 1995-96ನೇ ಸಾಲಿನಲ್ಲಿಯೂ ಸಹ ಆಸ್ಪತ್ರೆಗಳನ್ನು ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಚಿಕಿತ್ಸಾಲಯಗಳನ್ನು ತೆರೆಯುವ ಯೋಜನೆ ಇದೆ. ಜನಪ್ರಿಯ ಪ್ರಚಾರ ಮಾಧ್ಯಮಗಳಾದ ದಿನಪತ್ರಿಕೆಗಳು, ಆಕಾಶವಾಣಿ ಹಾಗೂ ದೂರದರ್ಶನದ ಮುಖಾಂತರ ಪ್ರಚಾರ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಆಯುರ್ವೇದ ಪದ್ಧತಿಯನ್ನು ಜನಪ್ರಿಯಗೊಳಿಸಲು ಹತ್ತಿರದ ವೈದ್ಯಕೀಯ ಸಂಸ್ಥೆಗಳ ವೈದ್ಯರಿಂದ ಚಿಕಿತ್ಸಾ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ.

ವಿಷಯ:- ರಾಜ್ಯದ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ತರಬೇತಿ ಶಿಕ್ಷಕರ ನೇಮಕ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:- 99(304)

ಶ್ರೀ ಕೆ.ಜಯರಾಮ ಶೆಟ್ಟಿ(ಉಳ್ಳಾಲ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯ ಸರ್ಕಾರವು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕ್ರೀಡಾ ತರಬೇತಿಗಾಗಿ ಶಿಕ್ಷಿತ ಅಧ್ಯಾಪಕರುಗಳ ನೇಮಕ ಮಾಡುವ ಆಲೋಚನೆ ಇದೆಯೇ?

ಆ) ಹಾಗಿದ್ದಲ್ಲಿ, ಖಾಸಗಿ ಮತ್ತು ಸರ್ಕಾರಿ ಶಾಲೆಗಳಲ್ಲಿ ಸರ್ಕಾರವು ಸಮಾನ ರೀತಿಯ